**3ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ, ಹಾಸನ**

**ಎಸ್.ಸಿ.ನಂ: 263/ 2023**

**ಚಾಸಾ-7, ಪ್ರಾಸಾ-8**

| | | |
|---|---|---|
| ಸಾಕ್ಷಿದಾರರ ಹೆಸರು | : | ಭಾಗ್ಯಲಕ್ಷ್ಮಿ |
| ಗಂಡನ ಹೆಸರು | : | ರಾಮೇಗೌಡ |
| ವಯಸ್ಸು | : | 40 ವರ್ಷ |
| ಉದ್ಯೋಗ | : | ಗೃಹಿಣಿ |
| ವಾಸಸ್ಥಳ | : | ವಿಜಯನಗರ, ಹಾಸನ |

**ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಿದ ದಿನಾಂಕ: 11.03.2025.**

**ಮುಖ್ಯ ವಿಚಾರಣೆ: ಸರ್ಕಾರಿ ಅಭಿಯೋಜಕರಿಂದ:**

1. ಚಾಸಾ-9 ನಮ್ಮ ಪಕ್ಕದ ಮನೆಯವರು. ಚಾಸಾ-6 ರವರು ನನಗೆ ಗೊತ್ತಿಲ್ಲ. ನ್ಯಾಯಾಲಯದ ಮುಂದಿರುವ 1ನೇ ಆರೋಪಿ ಯಾರು ಎಂದು ನನಗೆ ಗೊತ್ತಿಲ್ಲ ಹಾಗೂ ಆತ ಎಲ್ಲಿ ವಾಸವಾಗಿರುತ್ತಾನೆ ಎಂಬುದು ಸಹ ನನಗೆ ಗೊತ್ತಿಲ್ಲ. ಆತನನ್ನು ನಮ್ಮ ಅಕ್ಕಪಕ್ಕದ ಮನೆಯಲ್ಲಿ ನೋಡಿಲ್ಲ. ಆತನು ನಮ್ಮ ಮನೆಯ ಪಕ್ಕದ ಮನೆಗೆ ಒಬ್ಬ ಹುಡುಗಿಯ ಜೊತೆ ಬಂದಿದ್ದ ಎಂಬುದನ್ನು ನೋಡಿ, ಪೊಲೀಸರು ಬಂದು ವಿಚಾರಿಸಿದಾಗ ಈ ವಿಚಾರವನ್ನು ನಾನು ಹೇಳಿರುವುದಿಲ್ಲ. ಪ್ರಕರಣ ಸಂಬಂಧ ನನಗೆ ಯಾವುದೇ ವೈಯಕ್ತಿಕ ಮಾಹಿತಿ ಇರುವುದಿಲ್ಲ. ಈ ಸಂಬಂಧ ಪೊಲೀಸರಿಗೆ ನಾನು ಯಾವುದೇ ಹೇಳಿಕೆಯನ್ನು ಸಹ ನೀಡಿಲ್ಲ.

(ಈ ಸಂದರ್ಭದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರಿರುತ್ತಾರೆ, ದಾಖಲೆಗಳನ್ನು ಪರಿಶೀಲಿಸಿ, ಪಾಟೀಸವಾಲಿಗೆ ಅನುಮತಿ ನೀಡಿದೆ)

**ಪಾಟೀಸವಾಲು: ಸರ್ಕಾರಿ ಅಭಿಯೋಜಕರಿಂದ:**

2. ದಿ: 22.08.2023 ರಂದು ನಾನು ಪೊಲೀಸರಿಗೆ ನೀಡಿದ ಹೇಳಿಕೆಯಲ್ಲಿ "1ನೇ ಆರೋಪಿಯು ತನ್ನ ತಂದೆ ತಾಯಿ ಹಾಗೂ ತಮ್ಮನ ಜೊತೆ ಚಾಸಾ-9 ರವರ ಮನೆಯಲ್ಲಿ ಬಾಡಿಗೆಗೆ ವಾಸವಿದ್ದ ವಿಚಾರ ನನಗೆ ಗೊತ್ತು ಎಂದರೆ ಸರಿಯಲ್ಲ. ದಿ: 20.07.2023 ರಂದು ನಮ್ಮ

ಮನೆಯ ಹತ್ತಿರ ಇದ್ದಾಗ ------------------------------------------------------------
------------------------------------------------------------------------------------------------
------------------------------------------------------------------------------------------------

ಹೋಗುತ್ತಿದ್ದುದ್ದನ್ನು ನಾನು ನೋಡಿದೆ" ಎಂದು ಹೇಳಿರುತೆತೇನೆ ಎಂದರೆ ಸರಿಯಲ್ಲ. ನಂತರ ದಿಃ 26.07.2023 ರಂದು ಹಾಸನ ಮಹಿಳಾ ಪೊಲೀಸ್ ಠಾಣೆ ಅಧಿಕಾರಿಯವರು ----------------
------------------------------------------------------------------------------------------------
------------------------ ಕೇಸು ದಾಖಲಿಸಿರುವ ವಿಚಾರ ನನಗೆ ತಿಳಿದಿರುತ್ತೆ". ಸದರಿ ಹೇಳಿಕೆಯ ಭಾಗಗಳನ್ನು ಸಾಕ್ಷಿಗೆ ಓದಿ ಹೇಳಲಾಗಿ ಸಾಕ್ಷಿಯು ಅದನ್ನು ಅಲ್ಲಗಳೆದಿರುತ್ತಾರೆ. ಸದರಿ ಹೇಳಿಕೆಯ ಭಾಗಗಳನ್ನು ನಿಪಿ-14 ಎಂದು ಗುರುತಿಸಲಾಯಿತು. ಪ್ರಕರಣ ಸಂಬಂಧ ಎಲ್ಲಾ ಮಾಹಿತಿ ಇದ್ದರೂ ಸಹ ಹಾಗೂ ಈ ಸಂಬಂಧ ನಿಪಿ-14 ರಂತೆ ಹೇಳಿಕೆ ನೀಡಿದ್ದರೂ ಸಹ 1ನೇ ಆರೋಪಿ ನನ್ನ ಪಕ್ಕದ ಮನೆಯವನಾಗಿರುವುದರಿಂದ ಆತನಿಗೆ ಸಹಾಯ ಮಾಡಲೆಂದು ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀಸವಾಲುಃ ಆಪಾದಿತರ ಪರ ಶ್ರೀ ವಿ.ಎಂ ವಕೀಲರಿಂದಃ</u>**

ಆರೋಪಿಗಳ ಪರ ಯಾವುದೇ ಪಾಟೀಸವಾಲು ಇಲ್ಲ ಎಂದು ಹೇಳಿರುತ್ತಾರೆ.

**<u>ಮರು ವಿಚಾರಣೆಃ</u>** ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಸಾಕ್ಷ್ಯವನ್ನು ನನ್ನ ಸಮಕ್ಷಮ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇದೆ

3ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು,
ಹಾಸನ.